# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1878 |
| ಸದಸ್ಯರ ಹೆಸರು | : | ಶ್ರೀ ಚಿದಾನಂದ ಎಂ ಗೌಡ (ಪದವೀಧರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳಲ್ಲಿ ಶಾಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ; ಎಷ್ಟು ಶಾಲೆಗಳಿಗೆ ಶೌಚಾಲಯ ಸೌಲಭ್ಯವಿರುವುದಿಲ್ಲ; ಎಲ್ಲಾ ಶಾಲೆಗಳಿಗೆ ಶೌಚಾಲಯ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;</td><td>ರಾಜ್ಯದಲ್ಲಿ ಒಟ್ಟು 46112 ಸರ್ಕಾರಿ ಶಾಲೆಗಳಿವೆ ಎಲ್ಲಾ ಶಾಲೆಗಳಲ್ಲಿ ಶೌಚಾಲಯವನ್ನು ನಿರ್ಮಿಸಿ ಸೌಲಭ್ಯವನ್ನು ಒದಗಿಸಲಾಗಿದೆ.<br><br>ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಮೂಲಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಆದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆ ಅನುಗುಣವಾಗಿ ಅನುಮೋದನೆ ನೀಡಿ ಶಾಲೆಗಳಿಗೆ ಹೆಚ್ಚುವರಿಯಾಗಿ ಅಗತ್ಯವಿರುವ ಶೌಚಾಲಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.<br><br>ರಾಜ್ಯ ವಲಯ ಯೋಜನೆಗಳಡಿ ಅಗತ್ಯತೆಗೆ ಅನುಗುಣವಾಗಿ ಹೊಸದಾಗಿ ಶೌಚಾಲಯವನ್ನು ನಿರ್ಮಾಣ ಮಾಡಲು ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಮಂಜೂರಾದ ಶಾಲೆಗಳು</th><th>ಬಿಡುಗಡೆ ಮಾಡಲಾಗಿರುವ ಅನುದಾನ ರೂ.ಲಕ್ಷಗಳಲ್ಲಿ</th></tr>
<tr><td>1</td><td>2022-23</td><td rowspan="3">7650</td><td>3500.00</td></tr>
<tr><td>2</td><td>2023-24</td><td>8000.00</td></tr>
<tr><td>3</td><td>2024-25</td><td>12106.65</td></tr>
<tr><td></td><td>ಒಟ್ಟು</td><td></td><td>23606.65</td></tr>
</table>
</td></tr>
</table>

<table>
<tr>
<td></td>
<td></td>
<td>ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮ, ಪಿ.ಎಂ ಶ್ರೀ ಮತ್ತು ಕರ್ನಾಟಕ ಪಬ್ಲಿಕ್ ಶಾಲೆಗಳ ಕಾರ್ಯಕ್ರಮಗಳಡಿ ಶೌಚಾಲಯ ನಿರ್ಮಾಣಕ್ಕೆ ಒದಗಿಸಲಾಗಿರುವ ಅನುದಾನದ ವಿವರ ಕೆಳಕಂಡಂತಿದೆ.<br>ರೂ.ಲಕ್ಷಗಳಲ್ಲಿ
<table>
<tr><th rowspan="2">ಕ್ರ.ಸಂ</th><th rowspan="2">ಯೋಜನೆ</th><th rowspan="2">ವರ್ಷ</th><th colspan="2">ಅನುಮೋದಿತ</th></tr>
<tr><th>ಭೌತಿಕ</th><th>ಆರ್ಥಿಕ</th></tr>
<tr><td>1</td><td>ಸಮಗ್ರ ಶಿಕ್ಷಣ</td><td>2023-24</td><td>195</td><td>524.70</td></tr>
<tr><td>2</td><td rowspan="2">ಪಿ.ಎಂ ಶ್ರೀ</td><td>2023-24</td><td>17</td><td>60.35</td></tr>
<tr><td>3</td><td>2024-25</td><td>33</td><td>132.00</td></tr>
<tr><td>4</td><td>ಕೆ.ಪಿ.ಎಸ್</td><td>2022-23</td><td>15</td><td>90.85</td></tr>
<tr><td></td><td>ಒಟ್ಟು</td><td></td><td>260</td><td>807.90</td></tr>
</table>
</td>
</tr>
<tr>
<td>ಆ)</td>
<td>ರಾಜ್ಯದ ಎಷ್ಟು ಶಾಲೆಗಳಲ್ಲಿ ಡಿ ಗ್ರೂಪ್ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ; ಎಷ್ಟು ಶಾಲೆಗಳಲ್ಲಿ ಡಿ ಗ್ರೂಪ್ ನಕರರ ಹುದ್ದೆ ಖಾಲಿಯಿವೆಯೇ;</td>
<td>ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಯಾವುದೇ ಡಿ ಗ್ರೂಪ್ ನೌಕರರ ಹುದ್ದೆಗಳು ಮಂಜೂರಾಗಿರುವುದಿಲ್ಲ. ಉಳಿದಂತೆ ಸರ್ಕಾರಿ ಪ್ರೌಢಶಾಲೆಗಳಿಗೆ ರಾಜ್ಯದಾದ್ಯಂತ 5788 ಡಿ ಗ್ರೂಪ್ ನೌಕರರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 2761 ಹುದ್ದೆಗಳಲ್ಲಿ ಡಿ ಗ್ರೂಪ್ ನೌಕರರ ಕಾರ್ಯನಿರ್ವಹಿಸುತ್ತಿದ್ದು, 3027 ಡಿ ಗ್ರೂಪ್ ನೌಕರರ ಹುದ್ದೆಗಳು ಖಾಲಿ ಇರುತ್ತದೆ.</td>
</tr>
<tr>
<td>ಇ)</td>
<td>ಡಿ ಗ್ರೂಪ್ ನೌಕರರು ಇಲ್ಲದ ಕಡೆಯಲ್ಲಿ ಶಾಲೆಯ ಮತ್ತು ಶೌಚಾಲಯಗಳ ಸ್ವಚ್ಛತೆ ಮಾಡುವವರು ಯಾರು;</td>
<td>ಸರ್ಕಾರಿ ಶಾಲೆಗಳಲ್ಲಿನ ಶೌಚಾಲಯದ ನಿರ್ವಹಣೆಗಾಗಿ ಪ್ರತಿ ವರ್ಷ ರಾಜ್ಯ ಯೋಜನೆ ಮುಂದುವರೆದ ಕಾರ್ಯಕ್ರಮ ಮತ್ತು ಸಮಗ್ರ ಶಿಕ್ಷಣಾ ಕಾರ್ಯಕ್ರಮಗಳಡಿ ನಿರ್ವಹಣಾ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ. ಶಾಲೆಗಳಿಗೆ ಬಿಡುಗಡೆ ಮಾಡಲಾದ ಅನುದಾನದಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯವನ್ನು ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯಗಳ ಸ್ವಚ್ಛಾತಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.</td>
</tr>
<tr>
<td>ಈ)</td>
<td>ರಾಜ್ಯದ ಎಲ್ಲಾ ಶಾಲೆಗಳಿಗೆ ಡಿ ಗ್ರೂಪ್ ನೌಕರರನ್ನು ನೇಮಕ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು?</td>
<td>ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಡಿ ಗ್ರೂಪ್ ನೌಕರರ ಹುದ್ದೆಗಳಿಗೆ ಅನುಕಂಪ ಆಧಾರದ ನೇಮಕಾತಿಯಿಂದ ಭರ್ತಿ ಮಾಡಲಾಗುತ್ತಿದೆ.</td>
</tr>
</table>

ಇಪಿ110 ಯೋಸಕ 2026

(ಎಸ್.ಮಧು ಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**